# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 68 (24)

ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 07.12.2020

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಕಾರಣಗಳಿಂದ ತೆರವಾದ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯ ಕಾರಣ ನೀಡಿ ನೇಮಕಾತಿಯನ್ನು ತಡೆಹಿಡಿಯುವಂತೆ ಆದೇಶ ಮಾಡಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಇದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ಪರೀಕ್ಷೆಯ ಫಲಿತಾಂಶಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; | ಕೋವಿಡ್-19 ಮಹಾಮಾರಿಯಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನಲೆಯಲ್ಲಿ ಸಂಪನ್ಮೂಲ ಕ್ರೋಢೀಕರಣದ ದೃಷ್ಟಿಯಿಂದ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020.ದಿ: 10/6/2020ರನ್ವಯ ಆರ್ಥಿಕ ಮಿತವ್ಯಯ ಹೇರಲಾಗಿದೆ.<br>ಪ್ರಸ್ತುತ ಸಾಲಿನಲ್ಲಿ ಶಾಲೆಗಳು ಪ್ರಾರಂಭವಾಗಿರುವುದಿಲ್ಲ. ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಆಡಳಿತ ಮಂಡಳಿಯವರು ತಾತ್ಕಾಲಿಕವಾಗಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಆಡಳಿತ ಮಂಡಳಿಯವರೇ ವೇತನವನ್ನು ಭರಿಸಬೇಕಾಗಿರುತ್ತದೆ.<br>ಕೋವಿಡ್-19 ಮಹಾಮಾರಿಯು ಹತೋಟಿಗೆ ಬರದೆ ದಿನದಿಂದ ದಿನಕ್ಕೆ ತೀವ್ರ ಸ್ವರೂಪದಲ್ಲಿ ಏರಿಕೆಯಾಗುತ್ತಲೇ ಇರುವುದರಿಂದ ಕಾಲಮಿತಿ ನಿಗಧಿಪಡಿಸಲು ಸಾಧ್ಯವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. |
| ಈ) | ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಆದೇಶ ಹೊರಡಿಸುವುದು ಯಾವಾಗ;(ವಿವರ ನೀಡುವುದು) | |

ಸಂ:ಇಪಿ 364 ಎಸ್ಇಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು